# National
# Kannada
# 27.01.2025 7.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಎನ್‌ಸಿಸಿ ಕೆಡೆಟ್‌ಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ
2. ವೇವ್ಸ್ ಬಜಾರ್, ಡಬ್ಲ್ಯೂಎಚ್ ಉಸ್ತಾದ್ ಚಾಲೆಂಜ್ ಅನಾವರಣಗೊಳಿಸಿದ ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಗಜೇಂದ್ರ ಸಿಂಗ್ ಶೇಖಾವತ್
3. ಒಮನ್ ವಾಣಿಜ್ಯ ಸಚಿವರೊಂದಿಗೆ ಕೇಂದ್ರ ಸಚಿವ ಪಿಯೂಶ್ ಗೋಯಲ್ ದ್ವಿಪಕ್ಷೀಯ ಮಾತುಕತೆ
4. ಐಸಿಸಿ ವರ್ಷದ ಟೆಸ್ಟ್ ಕ್ರಿಕೆಟಿಗ ಪ್ರಶಸ್ತಿಗೆ ಜಸ್ಪ್ರೀತ್ ಬೂಮ್ರಾ, ವರ್ಷದ ಏಕದಿನ ಕ್ರಿಕೆಟ್ ಆಟಗಾರ್ತಿ ಪ್ರಶಸ್ತಿಗೆ ಸ್ಮೃತಿ ಮಂದಾನ ಭಾಜನ

*****************

'ಒಂದು ರಾಷ್ಟ್ರ ಒಂದು ಚುನಾವಣೆ' ಅಡಿಯಲ್ಲಿ ಏಕಕಾಲದಲ್ಲಿ ಚುನಾವಣೆಗಳನ್ನು ನಡೆಸುವ ಅಗತ್ಯವನ್ನು ಒತ್ತಿ ಹೇಳಿರುವ ಪ್ರಧಾನಿ ನರೇಂದ್ರ ಮೋದಿ, ಯುವಜನರು ಈ ಬಗ್ಗೆ ವಿಸ್ತೃತ ಚರ್ಚೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

ನವದೆಹಲಿಯ ಕಾರ್ಯಪ್ಪ ಪರೇಡ್ ಮೈದಾನದಲ್ಲಿಂದು ನಡೆದ ವಾರ್ಷಿಕ ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್-ಎನ್‌ಸಿಸಿ ರ‍್ಯಾಲಿಯನ್ನುದ್ದೇಶಿಸಿ ಅವರು ಮಾತನಾಡಿದರು.

ದೇಶದ ಯುವಕರು ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯಾಗಿದ್ದಾರೆ. ಕಳೆದ ಹತ್ತು ವರ್ಷಗಳಲ್ಲಿ ಒಂದು ಲಕ್ಷ 50 ಸಾವಿರಕ್ಕೂ ಹೆಚ್ಚು ನವೋದ್ಯಮಗಳನ್ನು ಯುವಕರು ಪ್ರಾರಂಭಿಸಿದ್ದು, ವಿಶ್ವದ ಉನ್ನತ ಕಂಪನಿಗಳನ್ನು ಮುನ್ನಡೆಸುತ್ತಿದ್ದಾರೆ ಎಂದು ಪ್ರಧಾನಿ ಮೋದಿ ಶ್ಲಾಘಿಸಿದರು.

ಧ್ವನಿ: ಪ್ರಧಾನಿ ಮೋದಿ

'ಯುವ ಶಕ್ತಿ, ವಿಕಸಿತ ಭಾರತ' ಎಂಬುದು ಈ ವರ್ಷದ ಎನ್‌ಸಿಸಿ ಪಿಎಂ ರ‍್ಯಾಲಿಯ ಧ್ಯೇಯವಾಕ್ಯವಾಗಿದೆ.

ರ‍್ಯಾಲಿಯಲ್ಲಿ 18 ಮಿತ್ರ ರಾಷ್ಟ್ರಗಳಿಂದ 144 ಯುವ ಕೆಡೆಟ್‌ಗಳು ಭಾಗವಹಿಸಿದ್ದಾರೆ. ಅಲ್ಲದೆ, ದೇಶಾದ್ಯಂತದ ಮೇರಾ ಯುವ ಭಾರತ್, ಶಿಕ್ಷಣ ಸಚಿವಾಲಯ ಮತ್ತು ಬುಡಕಟ್ಟು ವ್ಯವಹಾರಗಳ 650ಕ್ಕೂ ಹೆಚ್ಚು ಸ್ವಯಂಸೇವಕರು ವಿಶೇಷ ಅತಿಥಿಗಳಾಗಿ ರ‍್ಯಾಲಿಯಲ್ಲಿ ಭಾಗವಹಿಸಿದ್ದಾರೆ. ಈ ಸಂದರ್ಭದಲ್ಲಿ, 800ಕ್ಕೂ ಹೆಚ್ಚು ಕೆಡೆಟ್‌ಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ರಾಷ್ಟ್ರ ನಿರ್ಮಾಣದ ಕಡೆಗೆ ಎನ್‌ಸಿಸಿಯ ಬದ್ಧತೆಯನ್ನು ಪ್ರದರ್ಶಿಸಲಾಗುತ್ತಿದೆ

****************

ಒಡಿಶಾದ ಭುವನೇಶ್ವರದ ಜನತಾ ಮೈದಾನದಲ್ಲಿ ನಾಳೆ ಉತ್ಕೃರ್ಷ್ ಒಡಿಶಾ ಮೇಕ್-ಇನ್-ಒಡಿಶಾ ಸಮಾವೇಶವನ್ನು ಪ್ರಧಾನಿ ನರೇಂದ್ರ ಮೋದಿ ನಾಳೆ ಉದ್ಘಾಟಿಸಲಿದ್ದಾರೆ. ಎರಡು ದಿನಗಳ ಸಮಾವೇಶದಲ್ಲಿ 20 ವಿದೇಶಿಯರು ಸೇರಿದಂತೆ 7 ಸಾವಿರದ 500ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಒಡಿಶಾ ಅತ್ಯಂತ ದೊಡ್ಡ ವ್ಯಾಪಾರ ಸಮಾವೇಶವನ್ನು ಆಯೋಜಿಸಲು ಸಕಲ ಸಿದ್ಧತೆ ಕೈಗೊಂಡಿದೆ.

ಸಮಾವೇಶದಲ್ಲಿ 100ಕ್ಕೂ ಹೆಚ್ಚು ಒಪ್ಪಂದಗಳಿಗೆ ಸಹಿ ಹಾಕಲಾಗುವುದು. ಇದು 33 ಲಕ್ಷ ಜನರಿಗೆ ಉದ್ಯೋಗವನ್ನು ಸೃಷ್ಟಿಸುವ ಸಾಮರ್ಥ್ಯವನ್ನು ಹೊಂದಿದೆ.

****************

ವೇವ್ಸ್ ಬಜಾರ್, ಡಬ್ಲ್ಯೂಎಎಚ್ ಉಸ್ತಾದ್ ಚಾಲೆಂಜ್ ಮತ್ತು ವೇವ್ಸ್ ಪ್ರಶಸ್ತಿಗಳನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ನವದೆಹಲಿಯಲ್ಲಿಂದು ಅನಾವರಣಗೊಳಿಸಿದರು.

ಈ ವೇಳೆ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಭಾರತವು ತನ್ನ ಪರಂಪರೆ, ಶ್ರೀಮಂತ ಸಂಸ್ಕೃತಿಯಿಂದಾಗಿ ಜಾಗತಿಕವಾಗಿ ಹೆಚ್ಚಿನ ಪ್ರಾಮುಖ್ಯತೆಯನ್ನು ಪಡೆಯುತ್ತಿದೆ. ಭಾರತ ಶೀಘ್ರದಲ್ಲೇ ಸೃಜನಶೀಲ ಆರ್ಥಿಕತೆಯ ರಾಜಧಾನಿ ಆಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಧ್ವನಿ: ಅಶ್ವಿನಿ ವೈಷ್ಣವ್

ಇದೇ ವೇಳೆ, ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮಾತನಾಡಿ, ಈ ಉಪಕ್ರಮಗಳು ಭಾರತದ ಶಕ್ತಿಯನ್ನು ಪ್ರಪಂಚಾದ್ಯಂತ ಪಸರಿಸಲಿದೆ. ಭಾರತವು ಆರ್ಥಿಕತೆ, ತಂತ್ರಜ್ಞಾನ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಪ್ರಗತಿ ಸಾಧಿಸುತ್ತಿದೆ. ಭಾರತದ ಸಂಸ್ಕೃತಿ ದೇಶದ ನಿಜವಾದ ಶಕ್ತಿ. ವೇವ್ಸ್ ಇದನ್ನು ಬಳಸಿಕೊಳ್ಳಲು ಸಾಧ್ಯವಾಗುತ್ತದೆ ವಿಶ್ವಾಸ ವ್ಯಕ್ತಡಿಸಿದ್ದಾರೆ.

****************

ಒಮನ್ ಪ್ರವಾಸದಲ್ಲಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಮಸ್ಕತ್‌ನಲ್ಲಿ ಇಂದು, ಒಮನ್‌ನ ವಾಣಿಜ್ಯ, ಕೈಗಾರಿಕಾ ಮತ್ತು ಹೂಡಿಕೆ ಸಚಿವ ಕೈಸ್ ಬಿನ್ ಮೊಹಮ್ಮದ್ ಅಲ್ ಯೂಸುಫ್ ಅವರೊಂದಿಗೆ ಸಭೆ ನಡೆಸಿದರು.

ಭಾರತ ಮತ್ತು ಒಮನ್ ನಡುವಿನ ಸಮಗ್ರ ಆರ್ಥಿಕ ಪಾಲುದಾರಿಕೆಯ ಒಪ್ಪಂದದ ಕುರಿತು ಮಾತುಕತೆಗಳನ್ನು ಮುಂದುವರಿಸುವುದು, ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಬಲಪಡಿಸುವುದು, ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಗಾಢಗೊಳಿಸುವ ಮಾರ್ಗಗಳನ್ನು ಅನ್ವೇಷಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು.

ಮಸ್ಕತ್‌ಗೆ ಎರಡು ದಿನಗಳ ಭೇಟಿಯಲ್ಲಿರುವ ಪಿಯೂಶ್ ಗೋಯಲ್ ಅವರು, ನಾಳೆ 11ನೇ ಜಂಟಿ ಆಯೋಗದ ಸಭೆಯಲ್ಲಿ ಭಾಗವಹಿಸಲಿದ್ದಾರೆ.

****************

ಉತ್ತರಾಖಂಡದಲ್ಲಿ ಇಂದಿನಿಂದ ಏಕರೂಪ ನಾಗರಿಕ ಸಂಹಿತೆ –ಯುಸಿಸಿ ಜಾರಿಗೆ ಬಂದಿದೆ. ಆ ಮೂಲಕ ಉತ್ತರಾಖಂಡ್, ಈ ಕಾನೂನನ್ನು ಜಾರಿಗೆ ತಂದ ಮೊದಲ ರಾಜ್ಯವಾಗಿದೆ.

ಅಧಿಕೃತ ತರಬೇತಿ ಸೇರಿದಂತೆ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಎಲ್ಲಾ ನಾಗರಿಕರಿಗೆ ಸಮಾನ ಹಕ್ಕುಗಳನ್ನು ಖಾತ್ರಿಪಡಿಸುವ ಮೂಲಕ ವೈಯಕ್ತಿಕ ನಾಗರಿಕ ಕಾನೂನುಗಳನ್ನು ಪ್ರಮಾಣೀಕರಿಸುವುದು ಏಕರೂಪ ನಾಗರಿಕ ಸಂಹಿತೆ–ಯುಸಿಸಿಯ ಗುರಿಯಾಗಿದೆ ಎಂದು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಹೇಳಿದ್ದಾರೆ.

ಜಾತಿ, ಧರ್ಮ ಮತ್ತು ಲಿಂಗದ ಆಧಾರದ ಮೇಲೆ ತಾರತಮ್ಯ ಮಾಡುವ ವೈಯಕ್ತಿಕ ನಾಗರಿಕ ವಿಷಯಗಳಿಗೆ ಸಂಬಂಧಿಸಿದ ಎಲ್ಲಾ ಕಾನೂನುಗಳಲ್ಲಿ ಏಕರೂಪತೆಯನ್ನು ತರಲು ಯುಸಿಸಿ ಅಡಿಯಲ್ಲಿ ಪ್ರಯತ್ನಿಸಲಾಗಿದೆ. ಧರ್ಮವನ್ನು ಲೆಕ್ಕಿಸದೆ, ಪರಿಶಿಷ್ಟ ಪಂಗಡಗಳನ್ನು ಹೊರತುಪಡಿಸಿ, ರಾಜ್ಯದ ಎಲ್ಲಾ ನಾಗರಿಕರಿಗೆ ಮದುವೆ, ವಿಚ್ಛೇದನ, ಮತ್ತು ಉತ್ತರಾಧಿಕಾರದ ಕುರಿತು ಏಕರೂಪ ಮತ್ತು ಸಮಾನ ನಿಯಮಗಳನ್ನು ಸ್ಥಾಪಿಸಲು ಯುಸಿಸಿ ಪ್ರಯತ್ನಿಸುತ್ತದೆ. ಇದು ಎಲ್ಲಾ ವಿವಾಹಗಳು ಮತ್ತು ಲಿವ್–ಇನ್ ಸಂಬಂಧಗಳ ನೋಂದಣಿಯನ್ನು ಕಡ್ಡಾಯಗೊಳಿಸಿದೆ.

****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 2025–26ನೇ ಹಣಕಾಸು ವರ್ಷದ ಕೇಂದ್ರ ಬಜೆಟ್ ಅನ್ನು ಫೆಬ್ರವರಿ 1 ರಂದು ಮಂಡಿಸಲಿದ್ದಾರೆ.

ಮಂಬರುವ ಆಯವ್ಯಯ ಸರ್ಕಾರದ ಆರ್ಥಿಕ ಆದ್ಯತೆಗಳನ್ನು, ಹಣಕಾಸಿನ ಕಾರ್ಯ ತಂತ್ರಗಳನ್ನು ಅನಾವರಣಗೊಳಿಸಲು ನಿರೀಕ್ಷಿಸಲಾಗಿದೆ.

ಈ ಬಾರಿ ಸರ್ಕಾರವು ದೇಶದಲ್ಲಿ ದೃಢವಾದ ಮೂಲಸೌಕರ್ಯ ಮತ್ತು ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಒತ್ತು ನೀಡುವ ಮೂಲಕ ಬೆಳವಣಿಗೆ, ಉದ್ಯೋಗ ಸೃಷ್ಟಿ ಮತ್ತು ಹಣಕಾಸಿನ ವಿಷಯದ ಮೇಲೆ ಕೇಂದ್ರೀಕರಿಸುತ್ತದೆ ಎಂದು ತಜ್ಞರು ಮತ್ತು ನಾಗರಿಕರು ನಿರೀಕ್ಷಿಸುತ್ತಿದ್ದಾರೆ.

ಆಕಾಶವಾಣಿ ಬಾತ್ಮಿದಾರರೊಂದಿಗೆ ಮಾತನಾಡಿದ ಕೃಷಿ ಸ್ಟಾರ್ಟ್‌ಅಪ್‌ನ ಸಂಸ್ಥಾಪಕ ಯೂಸುಫ್ ರಫೀಕ್, ಸಾವಯುವ ಕೃಷಿ ಉತ್ಪನ್ನಗಳ ಪ್ರಮಾಣೀಕರಣಕ್ಕೆ ಕೇಂದ್ರ ಸರ್ಕಾರ ಒತ್ತು ನೀಡಬೇಕು ಎಂದು ಮನವಿ ಮಾಡಿದರು.

****************

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಶಾಹಿ ಪುಣ್ಯ ಸ್ನಾನ ಮಾಡಿದ್ದಾರೆ. ಈ ವೇಳೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹಾಗೂ ಹಲವು ಸ್ವಾಮೀಜಿಗಳು ಉಪಸ್ಥಿತರಿದ್ದರು.

ಮಹಾಕುಂಭಮೇಳ ಸನಾತನ ಸಂಸ್ಕೃತಿಯ ವಿಶಿಷ್ಟ ಸಂಕೇತ ಎಂದು ಇದೇ ವೇಳೆ ಸಚಿವ ಅಮಿತ್ ಶಾ ಹೇಳಿದರು.

*****************

ದೆಹಲಿಯಲ್ಲಿಂದು ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಅವರು ಇಂಡೋನೇಷಿಯಾ ನೌಕಾಪಡೆಯ ಮುಖ್ಯಸ್ಥ ಮೊಹಮ್ಮದ್ ಅಲಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಸಮುದ್ರ ಶಕ್ತಿ ಸಮಾರಾಭ್ಯಾಸ ಮುಂದುವರಿಸುವುದು, ಕಾರ್ಯಾಚರಣೆಯ ಸಹಯೋಗವನ್ನು ಬಲಪಡಿಸುವುದು ಹಾಗೂ ಸಮುದ್ರದಲ್ಲಿನ ಕಡಲ್ಗಳ್ಳತನ ಮತ್ತು ಇತರೆ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವುದು ಸೇರಿದಂತೆ ಕಡಲ ಸವಾಲುಗಳನ್ನು ಪರಿಹರಿಸುವ ಕುರಿತು ಉಭಯರು ಚರ್ಚೆ ನಡೆಸಿದರು.

ಇದೇ ವೇಳೆ, ಇಂಡೋನೇಷಿಯಾ ನೌಕಾಪಡೆಯ ಮುಖ್ಯಸ್ಥ ಮೊಹಮ್ಮದ್ ಅಲಿ ಅವರು, ಬ್ರಹ್ಮೋಸ್ ಏರೋಸ್ಪೇಸ್ ಪ್ರೈವೇಟ್ ಲಿಮಿಟೆಡ್‌ಗೆ ಭೇಟಿ ನೀಡಿದರು.

*****************

ಜನವರಿ 2024 ರಿಂದ ಈ ವರ್ಷದ ಜನವರಿ 26ರವರೆಗೆ ಗಡಿ ಭದ್ರತಾ ಪಡೆ–ಬಿಎಸ್‌ಎಫ್, ಪಂಜಾಬ್ ಗಡಿಯಲ್ಲಿ ಐದು ಪಾಕಿಸ್ತಾನಿ ಒಳನುಸುಳುಕೋರರನ್ನು ಹೊಡೆದುರುಳಿಸಿವೆ ಮತ್ತು ಪಾಕಿಸ್ತಾನದಿಂದ ಭಾರತದ ಗಡಿಯೊಳಗೆ ಒಳನುಸುಳಲು ಪ್ರಯತ್ನಿಸಿದ 30 ಪಾಕ್ ಪ್ರಜೆಗಳನ್ನು ಬಂಧಿಸಿದೆ.

ಅಮೃತಸರದಲ್ಲಿ ಈ ಕುರಿತು ಮಾಹಿತಿ ನೀಡಿದ ಬಿಎಸ್‌ಎಫ್ ಹೆಚ್ಚುವರಿ ಮಹಾನಿರ್ದೇಶಕ ಸತೀಶ್ ಖಂಡಾರೆ, ಇದೇ ಅವಧಿಯಲ್ಲಿ 101 ಭಾರತೀಯ ಕಳ್ಳ ಸಾಗಣೆದಾರರನ್ನು ಸಹ ಬಂಧಿಸಲಾಗಿದೆ ಎಂದು ತಿಳಿಸಿದರು.

ಪಂಜಾಬ್ ಫ್ರಾಂಟಿಯರ್‌ನ ಬಿಎಸ್‌ಎಫ್‌ನ ಇನ್ಸ್‌ಪೆಕ್ಟರ್ ಜನರಲ್ ಡಾ.ಅತುಲ್ ಫುಲ್ಜೆಲೆ ಮಾತನಾಡಿ, 301 ಕೆ.ಜಿ ಹೆರಾಯಿನ್, 319 ಪಾಕಿಸ್ತಾನಿ ಡ್ರೋನ್‌ಗಳು, 40 ವಿವಿಧ ಶಸ್ತ್ರಾಸ್ತ್ರಗಳು ಮತ್ತು 375ಕ್ಕೂ ಹೆಚ್ಚು ಮದ್ದು–ಗುಂಡುಗಳನ್ನು ಬಿಎಸ್‌ಎಫ್ ವಶಪಡಿಸಿಕೊಂಡಿದೆ ಎಂದು ಮಾಹಿತಿ ನೀಡಿದರು.

ಗಡಿಯಾಚೆಗಿನ ಅಪರಾಧಗಳನ್ನು ತಡೆಯಲು ಬಿಎಸ್‌ಎಫ್‌ಗೆ ಸಹಾಯ ಮಾಡುವಲ್ಲಿ ಗ್ರಾಮ ರಕ್ಷಣಾ ಸಮಿತಿಗಳ ಬೆಂಬಲವನ್ನು ಇದೇ ವೇಳೆ ಅವರು ಶ್ಲಾಘಿಸಿದರು.

*****************

ಕೋಲ್ಕತ್ತಾದ ವಿವೇಕಾನಂದ ಯುವ ಭಾರತಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಸೂಪರ್ ಲೀಗ್ – ಐಎಸ್‌ಎಲ್ ಫುಟ್‌ಬಾಲ್ ಪಂದ್ಯದಲ್ಲಿ ಇಂದು, ಮೋಹನ್ ಬಗಾನ್ ಸೂಪರ್ ಜೈಂಟ್ ತಂಡ ಮತ್ತು ಬೆಂಗಳೂರು ಎಫ್‌ಸಿ ತಂಡ ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

*****************

ಐಸಿಸಿ ಪುರುಷರ ವರ್ಷದ ಟೆಸ್ಟ್ ಕ್ರಿಕೆಟಿಗ ಪ್ರಶಸ್ತಿಗೆ ಭಾರತದ ವೇಗದ ಬೌಲರ್ ಜಸ್ಪ್ರಿತ್ ಬೂಮ್ರಾ ಭಾಜನರಾಗಿದ್ದಾರೆ. ಮಹಿಳೆಯರ ವರ್ಷದ ಏಕದಿನ ಕ್ರಿಕೆಟ್ ಆಟಗಾರ್ತಿಯಾಗಿ ಸ್ಮೃತಿ ಮಂದಾನ ಹೊರಹೊಮ್ಮಿದ್ದಾರೆ.

2024ರಲ್ಲಿ ಆಡಿದ 13 ಪಂದ್ಯಗಳಲ್ಲಿ ಬುಮ್ರಾ, 14.92 ಸರಾಸರಿಯಲ್ಲಿ 357 ಓವರ್‌ಗಳನ್ನು ಬೌಲಿಂಗ್ ಮಾಡಿ, 71 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಮಾರಕ ಯಾರ್ಕರ್‌ಗಳಿಗೆ ಹೆಸರುವಾಸಿಯಾದ ಬುಮ್ರಾ, ಏಕದಿನ ವಿಶ್ವಕಪ್ ಮತ್ತು ಪ್ರಮುಖ ಟೆಸ್ಟ್ ಸರಣಿಗಳಲ್ಲಿ ಅಸಾಧಾರಣ ಪ್ರದರ್ಶನಗಳನ್ನು ಒಳಗೊಂಡಂತೆ ಎಲ್ಲಾ ಸ್ವರೂಪಗಳಲ್ಲಿ ಭಾರತದ ಯಶಸ್ಸಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

ಇದೇ ವೇಳೆ, ಸ್ಮೃತಿ ಮಂದಾನ 2024ರಲ್ಲಿ ಆಡಿದ 13 ಏಕದಿನ ಪಂದ್ಯಗಳಲ್ಲಿ 747 ರನ್‌ಗಳನ್ನು ಪೇರಿಸಿದ್ದಾರೆ.

*****************

ಫ್ರಾನ್ಸ್‌ನಲ್ಲಿ ನಡೆಯಲಿರುವ ಮುಕ್ತ ಆಸಿಟ್ಯಾನಿ ಟೆನಿಸ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದ ಪ್ರಿಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು, ಭಾರತದ ಯು.ಕಿ.ಬಾಂಬ್ರಿ ಮತ್ತು ಕ್ರೋಯೇಶಿಯಾದ ಇವಾನ್ ಡೊಡಿಗ್ ಜೋಡಿಯು, ಜರ್ಮನಿಯ ಮಾರ್ಕ್ ವಾಲ್ನರ್ ಮತ್ತು ಜಾಕೊಬ್ ಶ್ನೈಟರ್ ಜೋಡಿ ವಿರುದ್ಧ ಸೆಣಸಾಟ ನಡೆಸಲಿದೆ.

ಪಂದ್ಯ ಭಾರತೀಯ ಕಾಲಮಾನ 8.40ಕ್ಕೆ ಆರಂಭವಾಗಲಿದೆ.

**********ಮುಕ್ತಾಯ********